ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಬಂದಿದೆ. ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿ 2010–11ನೇ ಸಾಲಿಗೆ 77 ಹೆಚ್ಚುವರಿ ಕೊಠಡಿಗಳು, 95 ಹೆಣ್ಣುಮಕ್ಕಳ ಶೌಚಾಲಯ, 32 ಶಾಲೆಗಳಿಗೆ ವಿದ್ಯುತ್ ಕಲ್ಪಿಸಲು ಮಂಜೂರಾಗಿರುತ್ತದೆ. ಕಾಮಗಾರಿಗಳು ವಿವಿಧ ಹಂತದಲ್ಲಿರುತ್ತದೆ. ಸದರಿ ತಾಲ್ಲೂಕಿನ ಸರ್ಕಾರಿ ಪ್ರೌಢಶಾಲೆಗೆ ಆರ್‌ಐಡಿಎಫ್ 14ರಡಿ 4 ಕೊಠಡಿಗಳನ್ನು ಮಂಜೂರು ಮಾಡಿದ್ದು, ಕಾಮಗಾರಿಯು ರೂಫ್ ಲೆವೆಲ್ ಹಂತದಲ್ಲಿರುತ್ತದೆ.

ಆ) ಬಂದಿದೆ.

ಇ) ಈಗಾಗಲೇ ಮಂಜೂರಾಗಿ ನಡೆಯುತ್ತಿರುವ ಹೊಸ ಸರ್ಕಾರಿ ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಮೂಲಭೂತ ಸೌಲಭ್ಯ ಒದಗಿಸುವವರೆಗೆ ಯಾವುದೇ ಹೊಸ ಶಾಲೆ ಮತ್ತು ಕಾಲೇಜುಗಳನ್ನು ಮಂಜೂರು ಮಾಡದಿರಲು ನಿರ್ಧಾರ ತೆಗೆದುಕೊಳ್ಳಲಾಗಿದೆ.

ಈ) ಬಂದಿರುತ್ತದೆ, ಆದರೆ ಪ್ರಾರಂಭಿಸಲಾದ ಹೊಸ ಸರ್ಕಾರಿ ಪ್ರೌಢಶಾಲೆಗಳಿಗೆ ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ಮೂಲಭೂತ ಸೌಲಭ್ಯ ಒದಗಿಸುವವರೆಗೆ ಹೊಸ ಶಾಲೆ ಮತ್ತು ಕಾಲೇಜುಗಳನ್ನು ಪ್ರಾರಂಭಿಸದಿರಲು ನಿರ್ಧಾರ ತೆಗೆದುಕೊಳ್ಳಲಾಗಿದೆ. ಆದಾಗ್ಯೂ ಹಾಲಿ ಕಾರ್ಯ ನಿರ್ವಹಿಸುತ್ತಿರುವ 437 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 2010–11ನೇ ಸಾಲಿನಲ್ಲಿ ವಿಜ್ಞಾನ ಸಂಯೋಜನೆಯನ್ನು 270 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಾಣಿಜ್ಯ ಸಂಯೋಜನೆಯನ್ನು ಪ್ರಾರಂಭಿಸಲು ಅನುಮತಿ ನೀಡಿದೆ.

ಉ) ಉದ್ಭವಿಸುವುದಿಲ್ಲ.

ಪಶು ವೈದ್ಯಕೀಯ ಆಸ್ಪತ್ರೆಗಳ ಮಂಜೂರಾತಿಯ ಬಗ್ಗೆ

92(238): ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ): ಮಾನ್ಯ ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶು ಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೊಪ್ಪಳ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಕವಲೂರು, ಮುನಿರಾಬಾದ್ ಡ್ಯಾಂ, ಕಾತರಿಕಿ, ಗುಡ್ಲಾನೂರು ಹಾಗೂ ಹೊಸ ನಿಂಗಾಪುರ

ಗ್ರಾಮಗಳಿಗೆ ಪಶು ವೈದ್ಯಕೀಯ ಆಸ್ಪತ್ರೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ, ಕೈಗೊಂಡ ಕ್ರಮಗಳೇನು?

ಇ) ಸದರಿ ಗ್ರಾಮಗಳಲ್ಲಿ ಪಶು ವೈದ್ಯಕೀಯ ಆಸ್ಪತ್ರೆಗಳನ್ನು ಪ್ರಸಕ್ತ ಸಾಲಿನಲ್ಲಿ ಪ್ರಾರಂಭಿಸಲಾಗುವುದೇ?

ಶ್ರೀ ರೇವೂನಾಯಕ ಬೆಳಮಗಿ (ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು):

ಅ) ಕವಲೂರು ಮತ್ತು ಕಾತರಿಕಿ ಗುಡ್ಲಾನೂರು ಗ್ರಾಮಗಳಲ್ಲಿ ಈಗಾಗಲೇ ಪಶು ಚಿಕಿತ್ಸಾಲಯಗಳು ಕಾರ್ಯ ನಿರ್ವಹಿಸುತ್ತಿವೆ. ಮುನಿರಾಬಾದ್ ಡ್ಯಾಂ ಮತ್ತು ಹೊಸನಿಂಗಾಪುರ ಗ್ರಾಮಗಳಲ್ಲಿ ಪಶುವೈದ್ಯಕೀಯ ಆಸ್ಪತ್ರೆಗಳನ್ನು ಮಂಜೂರು ಮಾಡುವ ಯಾವುದೇ ಪ್ರಸಾವನೆ ಸರ್ಕಾರದ ಮುಂದಿರುವುದಿಲ್ಲ;

ಆ) ರಾಜ್ಯದ ಬಹಳಷ್ಟು ಪಶು ಆಸ್ಪತ್ರೆ ಮತ್ತು ಪಶು ಚಿಕಿತ್ಸಾಲಯಗಳಲ್ಲಿ ಪಶು ವೈದ್ಯರ ಹುದ್ದೆಗಳು ಖಾಲಿ ಇದ್ದು, ಮೂಲಭೂತ ಸೌಕರ್ಯ ಮತ್ತು ಅರ್ಹ ಪದವೀಧರ ಪಶುವೈದ್ಯರ ಕೊರತೆಯಿಂದಾಗಿ ಹೊಸದಾಗಿ ಪಶು ವೈದ್ಯಕೀಯ ಸಂಸ್ಥೆಗಳನ್ನು ತೆರೆಯುವ ಪ್ರಸ್ತಾವನೆಯನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ.

ಇ) ಪ್ರಸಕ್ತ ಸಾಲಿನಲ್ಲಿ ಮುನಿರಾಬಾದ್ ಡ್ಯಾಂ ಮತ್ತು ಹೊಸ ನಿಂಗಾಪುರ ಗ್ರಾಮಗಳಲ್ಲಿ ಹೊಸದಾಗಿ ಪಶುವೈದ್ಯಕೀಯ ಆಸ್ಪತ್ರೆಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಇರುವುದಿಲ್ಲ.

ಪ್ರಥಮ ದರ್ಜೆ ಕಾಲೇಜು ಬಗ್ಗೆ

93 (290): ಶ್ರೀ ಖಾದರ್ ಯು. ಟಿ. (ಮಂಗಳೂರು): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) 2008 ರಿಂದ 2010ರ ವರೆಗೆ ರಾಜ್ಯದ ಗ್ರಾಮಾಂತರ ಪ್ರದೇಶದಲ್ಲಿ ಎಷ್ಟು ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸಲಾಗಿದೆ? (ಜಿಲ್ಲಾವಾರು ವಿವರ ನೀಡುವುದು):